ಸಮಾಚಾರ ಸಣ್ಣದಲ್ಲ

ಆರೋಗ್ಯ ಸಚಿವರ ಜಿಲ್ಲಾ ಪ್ರವಾಸ ಇಂದು

ಕೊಪ್ಪಳ: ಆರೋಗ್ಯ ಇಲಾಖೆ ಸಚಿವ ದಿನೇಶ ಗುಂಡೂರಾವ್ ಇಂದು ಕೊಪ್ಪಳ ಜಿಲ್ಲಾ ಪ್ರವಾಸ ಹಮ್ಮಿಕೊಂಡಿದ್ದಾರೆ. ಸಚಿವರು ಅಂದು ಬೆಳಗ್ಗೆ 9.30ಕ್ಕೆ ಹೊಸಪೇಟೆಯಿಂದ ನಿರ್ಗಮಿಸಿ ರಸ್ತೆ ಮೂಲಕ 10.30ಕ್ಕೆ ಯಲಬುರ್ಗಾ ತಾಲೂಕು ಬಂಡಿ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಉದ್ಘಾಟಿಸುವರು. ಸಣ್ಣ ನೀರಾವರಿ ಇಲಾಖೆಯ ಬ್ರಿಡ್ಜ್ ಕಂ ಬ್ಯಾರೇಜ್ ಶಂಕು ಸ್ಥಾಪನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಅಲ್ಲಿಂದ 12.30ಕ್ಕೆ ಚಿಕ್ಕಮ್ಯಾಗೇರಿ ಗ್ರಾಮಕ್ಕೆ ತೆರಳಿ, ಚಿಕ್ಕಮ್ಯಾಗೇರಿಯ ನೂತನ ಪ್ರಾಥಮಿಕ ಆರೋಗ್ಯ ಕೇಂದ್ರದ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮಧ್ಯಾಹ್ನ ಕುಕನೂರು ತಾಲೂಕು ಬಳಗೇರಿ ಗ್ರಾಮಕ್ಕೆ ತೆರಳಿ ಬಳಗೇರಿಯ ನೂತನ ಪ್ರಾಥಮಿಕ ಆರೋಗ್ಯ ಕೇಂದ್ರ ಉದ್ಘಾಟನೆ ಹಾಗೂ ಸಣ್ಣ ನೀರಾವರಿ ಇಲಾಖೆಯ ಬ್ರಿಡ್ಜ್ ಕಂ ಬ್ಯಾರೇಜ್ ಶಂಕು ಸ್ಥಾಪನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಕೆಕೆಆರ್ ಡಿಬಿ ಅಧ್ಯಕ್ಷರ ಪ್ರವಾಸ ಇಂದು

ಕೊಪ್ಪಳ: ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಡಾ.ಅಜಯ್ ಧರ್ಮಸಿಂಗ್ ಅ.23 ರಂದು ಕೊಪ್ಪಳ ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ. ಇಂದು ಬೆಳಗ್ಗೆ 10ಕ್ಕೆ ಕೊಪ್ಪಳ ತಾಲೂಕಿನ ವಿವಿಧ ಕಾಮಗಾರಿ ಪರಿಶೀಲನೆ ಮಾಡುವರು. ನಂತರ 11.30ಕ್ಕೆ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸುದ್ದಿಗೋಷ್ಠಿ ನಡೆಸುವರು. ಮಧ್ಯಾಹ್ನ 1ಕ್ಕೆ ಜೇವರ್ಗಿ ಕಡೆಗೆ ಪ್ರಯಾಣ ಬೆಳೆಸುವರು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರೈತ ಸಂಘದ ಕುಷ್ಟಗಿ ಘಟಕ ರಚನೆ

ಕುಷ್ಟಗಿ: ಕರ್ನಾಟಕ ರೈತ ಸಂಘ ಹಾಗೂ ಹಸಿರು ಸೇನೆ ಸಂಘಟನೆಯ ಕುಷ್ಟಗಿ ತಾಲೂಕು ಘಟಕ ಇತ್ತೀಚೆಗೆ ರಚಿಸಲಾಯಿತು. ಸಂಸ್ಥಾಪಕ ಅಧ್ಯಕ್ಷ ಶರಣಪ್ಪ ದೊಡ್ಡಮನಿ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಕಲ್ಯಾಣ ಕರ್ನಾಟಕ ವಿಭಾಗೀಯ ಅಧ್ಯಕ್ಷ ಪಂಪಣ್ಣ ನಾಯಕ ಅಧ್ಯಕ್ಷತೆ ವಹಿಸಿದ್ದರು. ತಾಲೂಕು ಘಟಕಕ್ಕೆ ಅವಿರೋಧವಾಗಿ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಗೌರವಾಧ್ಯಕ್ಷರಾಗಿ ಅಮರೇಶ ನಾಲತವಾಡ ಅಧ್ಯಕ್ಷರಾಗಿ ಆದೇಶ ರಾಮತಾಳ, ಉಪಾಧ್ಯಕ್ಷಾಗಿ ಅಂಜಿನಪ್ಪ ಮೂಕರ್ತಿನಾಳ, ಕಾರ್ಯದರ್ಶಿ ಬಸವರಾಜ ವಿರುಪಾಪುರ ಹಾಗೂ ಖಜಾಂಚಿ ನಾಗನಗೌಡ ಲಿಂಗದಹಳ್ಳಿ ಆಯ್ಕೆ ಮಾಡಲಾಯಿತು. ರಾಜ್ಯಾಧ್ಯಕ್ಷರು ಹಸಿರು ಶಾಲು ಹಾಕುವ ಮೂಲಕ ಪದಾಧಿಕಾರಿಗಳು ಮತ್ತು ಕಾರ್ಯಕರ್ತರನ್ನು ಸಂಘಟನೆಗೆ ಸ್ವಾಗತಿಸಿದರು.

ರಾಜ್ಯೋತ್ಸವ ಆಚರಣೆಗೆ ಕರೆ

ಕುಷ್ಟಗಿ: ನ. 1 ರಂದು ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಅತ್ಯಂತ ಅದ್ದೂರಿಯಾಗಿ ಬಹಳ ಅರ್ಥಪೂರ್ಣವಾಗಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ಮಾಡಬೇಕು ಎಂದು ತಹಸೀಲ್ದಾರರ ಅಶೋಕ ಶಿಗ್ಗಾವಿ ಹೇಳಿದರು. ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದ ಪೂರ್ವಭಾವಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಪ್ರತಿಯೊಬ್ಬರು ಕನ್ನಡ ಮನಸ್ಸುಗಳು, ಕನ್ನಡ ಪರ ಸಂಘಟನೆಗಳು, ಸರಕಾರಿ ಇಲಾಖೆ ಅಧಿಕಾರಿಗಳು ಸೇರಿದಂತೆ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು. ನಂತರ ಪತ್ರಕರ್ತ ರವೀಂದ್ರ ಬಾಂಕಳೆ ಮಾತನಾಡಿ, ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಸರಕಾರಿ ಇಲಾಖೆ ಅಧಿಕಾರಿಗಳು ಪ್ರತಿ ಸಾರಿ ರಾಜ್ಯೋತ್ಸವದ ಬಗ್ಗೆ ಬಹಳ ನಿರ್ಲಕ್ಷ್ಯ ತೋರುತ್ತಾರೆ ಈ ಬಾರಿ ಪ್ರತಿಯೊಬ್ಬರು ಹಾಗೂ ಸರಕಾರಿ ಇಲಾಖೆ ಅಧಿಕಾರಿಗಳು ಭಾಗವಹಿಸುವಂತೆ ನೋಡಿಕೊಳ್ಳಬೇಕು ಎಂದರು. ತದ ನಂತರ ಕನ್ನಡ ಸಾಹಿತ್ಯ ಪರಿಷತ್ತು ತಾಲೂಕು ಅಧ್ಯಕ್ಷ ವೀರೇಶ ಬಂಗಾರ ಶೆಟ್ಟರ್ ಮಾತನಾಡಿ, ಯಾವುದೇ ಕಾರಣಕ್ಕೂ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ಕಾಟಾಚಾರಕ್ಕೆ ಆಗಬಾರದು ಬಹಳ ಅರ್ಥಪೂರ್ಣ ಕಾರ್ಯಕ್ರಮ ನಡೆಯಬೇಕು ಕನ್ನಡದಲ್ಲಿ ಸಾಧನೆ ಮಾಡಿದ ತಾಲೂಕಿನ ಐದು ಮಂದಿ ಸಾಧಕನ್ನು ಗುರುತಿಸಿ ಸನ್ಮಾನಿಸಿ ಗೌರವಿಸಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಹಿರಿಯ ನಾಗರಿಕ ರಾಜ್ಯ ಪ್ರಶಸ್ತಿ ವಿಜೇತ ತಾಜುದ್ದೀನ್ ದಳಪತಿ, ಎಸ್.ವ್ಹಿ.ಡಾಣಿ, ಮುತ್ತಣ್ಣ ಬಾಚಲಾಪೂರ ಸೇರಿದಂತೆ ಸರಕಾರಿ ಇಲಾಖೆ ಅಧಿಕಾರಿಗಳು ಕನ್ನಡ ಪರ ಸಂಘಟನೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

ವಿ+
ಸೋಮವಾರ

{ಸಿದ್ದರಾಮಯ್ಯ } ಮುಖ್ಯಮಂತ್ರಿ

ಪ್ರಕೃತಿ ವಿಕೋಪದಿಂದ ಬಿದ್ದಿರುವ ಮಳೆ ಕಾರಣದಿಂದ ಆಗಿರುವ ಅನಾಹುತಗಳಿಗೆ ಪರಿಹಾರ ನೀಡುತ್ತೇವೆ. ಎಲ್ಲ ಸಿದ್ಧತೆ ಮಾಡಿಕೊಂಡಿದ್ದು, ಮಳೆ ಅನಾಹುತಗಳ ಕುರಿತು ನಿಗಾ ವಹಿಸಿದ್ದೇವೆ. ಸ್ಥಳ ಸಮೀಕ್ಷೆ ಕೂಡ ನಡೆಯುತ್ತಿದೆ. ಪರಿಹಾರ ನೀಡುತ್ತೇವೆ.

ಜಾತಿ ನಿಂದನೆ ಪ್ರಕರಣ ಕುರಿತು ಕೊಪ್ಪಳ ಜಿಲ್ಲಾ ನ್ಯಾಯಾಲಯ ತೀರ್ಪು
ಅಕ್ಟೋಬರ್ 24 ರಂದು ಶಿಕ್ಷೆ ಪ್ರಮಾಣ ಪ್ರಕಟಿಸಲಿರುವ ಕೋರ್ಟ್

ಒಂದೇ ಪ್ರಕರಣದ 101 ಮಂದಿ ಶಿಕ್ಷೆ

ಕೊಪ್ಪಳ: ದಲಿತರ ಮೇಲಿನ ದೌರ್ಜನ್ಯ ಮತ್ತು ಜಾತಿ ನಿಂದನೆ ಪ್ರಕರಣವೊಂದರಲ್ಲಿ ಬರೋಬ್ಬರಿ 101 ಆರೋಪಿಗಳು ತಪ್ಪಿತಸ್ಥರು ಎಂದು ಕೊಪ್ಪಳ ಜಿಲ್ಲಾ ನ್ಯಾಯಾಲಯ ತೀರ್ಮಾನಿಸಿದೆ. ಇನ್ನು ಅಪರಾಧಿಗಳಿಗೆ ನೀಡುವ ಶಿಕ್ಷೆಯ ಪ್ರಮಾಣದ ತೀರ್ಪು ಅ.24 ರಂದು ಪ್ರಕಟಿಸುವುದಾಗಿ ಆದೇಶ ಕಾಯ್ದಿರಿಸಲಾಗಿದೆ.

ಗಂಗಾವತಿ ತಾಲೂಕು ಮರಕುಂಬಿ ಗ್ರಾಮದಲ್ಲಿ ಕಳೆದ 2014ರ ಆ.29 ರಂದು ಗಂಗಾವತಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಪ್ರಕರಣಕ್ಕೆ ಸಂಬಂಧಿಸಿ ಕೋರ್ಟ್ ತೀರ್ಪು ನೀಡಿದೆ. ಬರೋಬ್ಬರಿ 10 ವರ್ಷಗಳ ಕಾಲ ಸುಧೀರ್ಘ ವಿಚಾರಣೆ ನಂತರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಸಿ.ಚಂದ್ರಶೇಖರ ತೀರ್ಪು ಪ್ರಕಟಿಸಿದ್ದಾರೆ. ಆರೋಪ ಸಾಬೀತಾಗಿದೆ ಎಂದು ಕೋರ್ಟ್ ತೀರ್ಮಾನ ಪ್ರಕಟಿಸುತ್ತಿದ್ದಂತೆಯೇ ನ್ಯಾಯಾಲಯದಲ್ಲಿ ಹಾಜರಿದ್ದ 100 ಅಪರಾಧಿಗಳನ್ನು ಪೊಲೀಸರು ವಶಕ್ಕೆ ಪಡೆದರು. ಶಿಕ್ಷೆ ಪ್ರಕಟಣೆ ದಿನ ನ್ಯಾಯಾಲಯಕ್ಕೆ ಹಾಜರಾಗಿರದ ಇನ್ನೂ ಒಬ್ಬ ಅಪರಾಧಿ ಬಂಧನಕ್ಕೆ ಪೊಲೀಸರು ಬಲೆ ಬೀಸಿದ್ದಾರೆ. ಜಾತಿ ನಿಂದನೆ ಹಾಗೂ ಅಸ್ಪೃಶ್ಯತೆ ಆಚರಣೆಯ ಒಂದೇ ಪ್ರಕರಣದಲ್ಲಿ ಇಷ್ಟೊಂದು ಆರೋಪಿಗಳು ಶಿಕ್ಷೆಗೆ ಗುರಿ ಆಗಿರುಗ ಪೈಕಿ ಇದೇ ಮೊದಲ ಪ್ರಕರಣ ಎನ್ನಲಾಗಿದೆ.

=ಪ್ರಕರಣದ ಹಿನ್ನೆಲೆ: ಕ್ಷೌರದ ಅಂಗಡಿ ಮತ್ತು ಹೋಟೆಲ್ ಗೆ ಪ್ರವೇಶಕ್ಕೆ ಸಂಬಂಧಿಸಿದಂತೆ, ದಲಿತರು ಮತ್ತು ಗ್ರಾಮದ ಸವರ್ಣೀಯರ ನಡುವೆ ಗಲಾಟೆ ಆರಂಭಗೊಂಡಿತ್ತು. ನಂತರ ಗಂಗಾವತಿಯ ಚಿತ್ರಮಂದಿರದಲ್ಲಿ ಆರಂಭವಾದ ಗಲಾಟೆ ಮರಕುಂಬಿ

ಗ್ರಾಮದಲ್ಲಿ ದಲಿತರ ಕೇರಿಗೆ ನುಗ್ಗಿ ಗುಡಿಸಲಿಗೆ ಬೆಂಕಿ ಇಡುವ ಹಂತ ತಲುಪಿತ್ತು. ಗಲಾಟೆ ಹಿನ್ನೆಲೆ ಪೊಲೀಸರು ಗ್ರಾಮದಲ್ಲಿ ಬೀಡು ಬಿಟ್ಟು ತನಿಖೆ ಆರಂಭಿಸಿದ್ದರು. ಆದರೆ, ಅದೇ ರಾತ್ರಿ ಆರೋಪಿಗಳು ದಲಿತರ ಕೇರಿಗೆ ನುಗ್ಗಿ ಗುಡಿಸಲಿಗೆ ಬೆಂಕಿ ಇಟ್ಟಿದ್ದರು.

ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಆಗಿರಲಿಲ್ಲ. ಸುಮಾರು ಒಂದು ವರ್ಷ ಗ್ರಾಮದಲ್ಲಿ ಪೊಲೀಸ್ ಬಂದೋಬಸ್ತ ನೇಮಿಸಿ, ಗಲಾಟೆನಿಯಂತ್ರಣಕ್ಕೆ ತರಲಾಗಿತ್ತು. ಕೂಡಲೇ ಸುಮಾರು 80 ಆರೋಪಿಗಳನ್ನು ಪೊಲೀಸರು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ನೀಡಿದ್ದರು. ತನಿಖೆ ನಡೆಸಿದ ಪೊಲೀಸರು ಒಟ್ಟು 117 ಜನರ ವಿರುದ್ಧ ದೋಷಾರೋಪ ಪಟ್ಟಿ ಸಲ್ಲಿಸಿದ್ದರು. ಈ ಪೈಕಿ ಈಗ 101 ಜನರಿಗೆ ಶಿಕ್ಷೆ ವಿಧಿಸಲಾಗಿದೆ.

ರಾಜ್ಯಾದ್ಯಂತ ಸದ್ದು ಮಾಡಿದ್ದ ಪ್ರಕರಣ!

ಮರಕುಂಬಿ ಪ್ರಕರಣ ಕಳೆದ 2014ರಲ್ಲಿ ರಾಜ್ಯಾದ್ಯಂತ ಸದ್ದು ಮಾಡಿತ್ತು. ಪೊಲೀಸ್ ಉನ್ನತ ಅಧಿಕಾರಿಗಳು ಗ್ರಾನಕ್ಕೆ ಭೇಟಿ ನೀಡಿ, ಪರಿಶೀಲನೆ ಮಾಡಿದ್ದರು. ದಾಖಲೆ ಪ್ರಮಾಣದಲ್ಲಿ ಆರೋಪಿಗಳನ್ನು ಬಂಧಿಸಿ ಜೈಲಿಗೆ ಕಳುಹಿಸಲಾಗಿತ್ತು. ನಂತರ ಆರೋಪಿಗಳು ಜಾಮೀನು ಪಡೆದು ಹೊರಗೆ ಬಂದಿದ್ದರು. ಇದೀಗ ಎಲ್ಲ ಆರೋಪಿಗಳು ಮತ್ತೇ ಜೈಲು ಪಾಲಾಗಲಿದ್ದಾರೆ.

ಗಂಗಾವತಿ ಗ್ರಾಮೀಣ ಠಾಣೆ ಪೊಲೀಸರು ಒಟ್ಟು 117 ಜನರ ವಿರುದ್ಧ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು. ಈ ಪೈಕಿ ಕೆಲವು ಆರೋಪಿಗಳು ಮೃತಪಟ್ಟಿದ್ದಾರೆ. ಹಲವರ ಹೆಸರು ರಿಪೀಟ್ ಆಗಿದ್ದವು. ಉಳಿದಂತೆ ಪ್ರಕರಣದ ಎಲ್ಲ ಆರೋಪಿಗಳಿಗೆ ಶಿಕ್ಷೆ ವಿಧಿಸಲಾಗಿದೆ. ಯಾರಿಗೆ ಎಷ್ಟು ಶಿಕ್ಷೆ ಎಂಬುದರ ಬಗ್ಗೆ ಅ.24 ರಂದು ತೀರ್ಪು ಕಾಯ್ದಿರಿಸಲಾಗಿದೆ.

– ಅರ್ಪಣಾ, ಸರಕಾರಿ ಅಭಿಯೋಜಕರು, ಕೊಪ್ಪಳ

ಅಯೋಡಿನ್ ನ್ಯೂನತೆ ನಿಯಂತ್ರಣ ಸಪ್ತಾಹ

ಬೇವೂರು ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ರಾಷ್ಟ್ರೀಯ ಅಯೋಡಿನ್ ಕೊರತೆಯ ನ್ಯೂನತೆ ನಿಯಂತ್ರಣ ಸಪ್ತಾಹ ಕಾರ್ಯಕ್ರಮ ನಡೆಯಿತು.

ಯಲಬುರ್ಗಾ: ತಾಲೂಕಿನ ಬೇವೂರು ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ರಾಷ್ಟ್ರೀಯ ಅಯೋಡಿನ್ ಕೊರತೆಯ ನ್ಯೂನತೆ ನಿಯಂತ್ರಣ ಸಪ್ತಾಹ ಕಾರ್ಯಕ್ರಮದ ಮಂಗಳವಾರ ನಡೆಯಿತು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವಿ.ಪಿ. ಮಾತನಾಡಿ, ಪ್ರತಿ ವರ್ಷ ಅ. 21 ರಿಂದ 27 ರವರೆಗೆ ರಾಷ್ಟ್ರೀಯ ಅಯೋಡಿನ್ ಕೊರತೆಯ ನ್ಯೂನತೆ ನಿಯಂತ್ರಣ ಸಪ್ತಾಹ ಕಾರ್ಯಕ್ರಮ ಆಚರಿಸಲಾಗುತ್ತದೆ. ಮನುಷ್ಯ ಬದುಕಲು ಮುಖ್ಯವಾಗಿ ನೀರು, ಗಾಳಿ ಹಾಗೂ ಆಹಾರ ಅಗತ್ಯ. ಅಯೋಡಿನ್ ಅಂಶ ಮುಖ್ಯವಾಗಿ ಗಜ್ಜರಿ, ಮೀನು, ಸಮುದ್ರಕಳೆ, ಸಿಗಡಿಮೀನಿನಲ್ಲಿ ಹೆಚ್ಚಾಗಿ ದೊರೆಯುತ್ತದೆ. ಅಯೋಡಿನ್ ಮನುಷ್ಯನ ಬುದ್ಧಿಮಟ್ಟ ಹೆಚ್ಚಿಸಲು ಪ್ರಮುಖ ಪಾತ್ರ ವಹಿಸುತ್ತದೆ. ವಿಶೇಷವಾಗಿ ಗರ್ಭಿಣಿಯರು, ಹಾಲುಣಿಸುವ ತಾಯಂದಿರು, ಮಕ್ಕಳು ಹಾಗೂ ಹದಿ-ಹರೆಯದವರು ಕಡ್ಡಾಯವಾಗಿ ಅಯೋಡಿನ್ ಉಪ್ಪು ಉಪಯೋಗಿಸಬೇಕು ಎಂದು ಸಲಹೆ ನೀಡಿದರು.

ಅಯೋಡಿನ್ ಉಪ್ಪು ಬಳಸದಿದ್ದರೆ ಗರ್ಭಪಾತ, ಸತ್ತು ಹುಟ್ಟುವ ಮಕ್ಕಳು, ಸಂತಾನೋತ್ಪಿಯಲ್ಲಿ ತೊಂದರೆ, ದೈಹಿಕ ಬೆಳವಣಿಗೆ ಕುಂಠಿತ, ವಯಸ್ಕರಲ್ಲಿ ನಿಶಕ್ತಿ, ಕಾರ್ಯ ನಿರ್ವಹಣೆಯಲ್ಲಿ ವೈಪಲ್ಯತೆ, ಗಳಗಂಡರೋಗ ಉಂಟಾಗುತ್ತದೆ. ಮಕ್ಕಳಲ್ಲಿ ಬುದ್ಧಿಮ್ಯಾಂದತೆ, ಕಲಿಕೆಯಲ್ಲಿ ಹಿಂದುಳಿವಿಕೆ, ಸರಿಪಡಿಸಲಾಗದ ದೈಹಿಕ ಮತ್ತು ಮಾನಸಿಕ ವಿಕಲತೆ, ಕುಂಟಿತ ಬೆಳವಣಿಗೆ, ಕಿವುಡ ಹಾಗೂ ಮೂಕತನ, ಮೆಳ್ಳೆಗಣ್ಣು, ಕುಬ್ಜತನ ಉಂಟಾಗುತ್ತದೆ ಎಂದು ತಿಳಿಸಿದರು. ವೈದ್ಯಾಧಿಕಾರಿ ಡಾ. ಪ್ರವೀಣ, ಸಮುದಾಯ ಆರೋಗ್ಯಾಧಿಕಾರಿ ಯಮನೂರಪ್ಪ, ಮಂಜುಳಾ ರಾಠೋಡ್, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಉಮಾ, ರತ್ನಾ, ಆಶಾ ಸುಗಮಕಾರರಾದ ಲಲಿತಾ ಇದ್ದರು.

ಪೊಲೀಸ್ ಹುತಾತ್ಮ ದಿನಾಚರಣೆ, ಗೌರವ ನಮನ | ಡಿಸಿ ಕೆ.ನಿತೀಶ್

ಪೊಲೀಸರ ಉತ್ತಮ ಸೇವೆ ಮೆಚ್ಚಿ ಪ್ರೋತ್ಸಾಹಿಸಿ

ರಾಯಚೂರು: ಸಮಾಜದಲ್ಲಿ ಪೊಲೀಸರ ಕರ್ತವ್ಯ ಇತರ ಸೇವೆಗಳಿಗಿಂತ ಕಠಿಣವಾದದ್ದು ಅವರ ಕೆಲಸದ ಬಗ್ಗೆ ಟೀಕೆ ಮಾಡದೆ ಉತ್ತಮ ಕೆಲಸ ಮಾಡಿದಾಗ ಸಾರ್ವಜನಿಕರು ಬೆನ್ನು ತಟ್ಟಿ ಪ್ರೋತ್ಸಾಹಿಸುವ ಕೆಲಸವೂ ಮಾಡಬೇಕು ಎಂದು ಜಿಲ್ಲಾಧಿಕಾರಿ ಕೆ.ನಿತೀಶ್ ಹೇಳಿದರು.

ಅವರು ನಗರದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿ ಆವರಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಪೊಲೀಸ್ ಹುತಾತ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಹುತಾತ್ಮ ಪೊಲೀಸರಿಗೆ ಗೌರವ ಸಲ್ಲಿಸಿ ಮಾತನಾಡಿದರು.

ಕರ್ತವ್ಯದಲ್ಲಿದ್ದಾಗ ಜೀವ ಕಳೆದುಕೊಂಡ ಪೊಲೀಸ್‌ರ ಸ್ಮರಣೆಗಾಗಿ ಹುತಾತ್ಮ ದಿನ ಆ ಆಚರಿಸಲಾಗುತ್ತದೆ. ಜಿಲ್ಲೆಯಲ್ಲೂ ಪೊಲೀಸರು ತಮ್ಮ ಕರ್ತವ್ಯದಲ್ಲಿದ್ದಾಗ ನಾನಾ ಕಾರಣಗಳಿಗೆ ಹುತಾತ್ಮರಾಗಿದ್ದಾರೆ ಅವರ ಸ್ಮರಣೆ ಜೊತೆಗೆ ಅವರ ನಂಬಿದ್ದ ಕುಟುಂಬಕ್ಕೂ ಇಲಾಖೆ ಸದಾ ಬೆಂಬಲಿಸುತ್ತದೆ.

–ಎಂ.ಪು ಟ್ಟಮಾದಯ್ಯ, ಪೊಲೀಸ್ ವರಿಷ್ಠಾಧಿಕಾರಿ

ಹಗಲಿರಳು ನಿರಂತರವಾಗಿ ಪೊಲೀಸರು ಸಮಾಜದಲ್ಲಿ ಶಾಂತಿ ಕಾಪಾಡುವ ಕೆಲಸ ಮಾಡುತ್ತಿದ್ದಾರೆ. ಮಿಲಿಟರಿ ಯವರಂತೆ ಕೆಲಸ ಮಾಡಿದ್ದರೂ ಅವರಿಗೆ ಆ ಸ್ಥಾನ ಮಾನಸಿಕ್ಕಿಲ್ಲ ಎಂದರು.

ಸಮಾಜದಲ್ಲಿ ಸಾರ್ವಜನಿಕರು, ಸಾಮಾಜಿಕ ಜಾಲತಾಣಗಳಲ್ಲಿ ನೆಟ್ಟಿಗರು ಪೊಲೀಸರ ತಪ್ಪುಗಳನ್ನು ಪ್ರಸರಿಸುತ್ತಿದ್ದಾರೆ ವಿನಃ ಅವರ ಪರಿಶ್ರಮ, ಸಾಧನೆ, ಸೇವೆಯನ್ನು ಸ್ಮರಿಸುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಅನೇಕ ಭಯೋತ್ಪಾದನೆ, ದ್ವೇಷ, ಪ್ರಚೋದನೆ

ನಗರದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿ ಆವರಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಪೊಲೀಸ್ ಹುತಾತ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಹುತಾತ್ಮ ಪೊಲೀಸರಿಗೆ ಗೌರವ ಸಲ್ಲಿಸಿದರು.

ಮತ್ತು ನಮಗೆ ಸಾಧ್ಯವಿಲ್ಲದ ಅನೇಕ ಘಟನೆಗಳನ್ನು ನಿಯಂತ್ರಿಸಿ ತಮ್ಮ ಪ್ರಾಣ ಪಣಕ್ಕಿಟ್ಟು ಅಪಾಯ ಲೆಕ್ಕಿಸದೆ ಮಟ್ಟ ಹಾಕಿ ಸೇವೆ ಸಲ್ಲಿಸುತ್ತಾರೆ ಅಂತಹ ಕೆಲಸವನ್ನು ಶ್ಲಾಘಿಸಬೇಕು. ಅವರಿಗೂ ಒಂದು ಕುಟುಂಬವಿದೆ, ಸಾಭಿಮಾನ, ಅತ್ತಗೌರವ

ಇದೆ ಅದಕ್ಕೆ ನಾವೆಲ್ಲರೂ ಮನ್ನಣೆ ಕೊಡಬೇಕಾದದ್ದು ಕರ್ತವ್ಯವಾಗಲಿ ಎಂದು ಸಲಹೆ ನೀಡಿದರು.

ಸರಕಾರ ಅನೇಕ ಸಂದರ್ಭದಲ್ಲಿ ಧನ ಸಹಾಯ ಮಾಡಿದೆ ಕುಟುಂಬದವರ ಸಮಸ್ಯೆಗಳಿಗೆ ಧ್ವನಿಯೂ ಆಗಿದೆ ಎಂದ ಅವರು, ಸಮಾಜದಲ್ಲಿ ಕೆಲಸ ಮಾಡುವ ಪೊಲೀಸರನ್ನು ಟೀಕಿಸುವುದೆ ಹೆಚ್ಚು ಆದರೆ, ಅವರು ಮಾಡಿದ ಮಹತ್ತರ ಕೆಲಸವನ್ನು ಬೆಂಬಲಿಸಿದ್ದು ಕಡಿಮೆ ಎಂದರು.

ಸಮಾಜದಲ್ಲಿನ ಪ್ರತಿಯೊಬ್ಬರು ತಪ್ಪುಗಳ ಗುರುತಿಸಿ ತೋರಿಸುವ ಜತೆಗೆ ಶಾಂತಿ ಕಾನೂನು ಸುವ್ಯವಸ್ಥೆ ಮಾಡಿದಾಗ' ಬೆನ್ನು ತಟ್ಟಲು ಹೇಳಿದರು. ಇಲಾಖೆ ಜನಸ್ನೇಹಿಯಾಗಿ ಕೆಲಸ ಮಾಡುತ್ತಿದ್ದು ಸಹಕಾರ ನೀಡಲು ಕೋರಿದರು.

ಇದಕ್ಕೂ ಮುನ್ನ ಕಾರ್ಯಕ್ರಮದಲ್ಲಿ ಭಾಗ ವಹಿಸಿದ್ದ ಪೊಲೀಸರ ಕುಟುಂಬಸ್ಥರು, ವಿವಿಧ ಕ್ಷೇತ್ರದ ಗಣ್ಯರು ಹುತಾತ್ಮ ಪೊಲೀಸರಿಗೆ ಪುಷ್ಪವಿರಿಸಿ ನಮಸ್ತರಿಸಿ ಗೌರವ ಸಲ್ಲಿಸಿದರು.

ವೇದಿಕೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ.ಶಿವಕುಮಾರ್, ಜಿ.ಹರೀಶ್ ಸೇರಿದಂತೆ ವಿವಿಧ ಠಾಣೆಯ ಪೊಲೀಸ್ ಅಧಿಕಾರಿಗಳು, ಸಿಬ್ಬಂದಿ, ಹುತಾತ್ಮ ಪೊಲೀಸರ ಕುಟುಂಬದವರು, ಸಾರ್ವಜನಿಕರಿದ್ದರು.

ಆದಾಯ ದ್ವಿಗುಣಗೊಳಿಸುವ ತಾಂತ್ರಿಕತೆ ರೈತರಿಗೆ ಪರಿಚಯಿಸಿ

**ಅವರು ತಾಲೂಕಿನ ಪೂರತಿಪ್ಲಿ ಗ್ರಾಮದಲ್ಲಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಕೃಷಿ ಮಹಾವಿದ್ಯಾಲ